**ಕರ್ನಾಟಕ ಸರ್ಕಾರ**

ಸಂ: ಪಸಂಮೀ ಇ-325 ಪಅಸೇ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 25.01.2022

**ಸುತ್ತೋಲೆ**

ವಿಷಯ: ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರದ ಕುಲಪತಿಯವರ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ.

*****

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿನ ಕುಲಪತಿಯವರ ಹುದ್ದೆಯ ಅವಧಿಯು ದಿನಾಂಕ: 22.02.2022ಕ್ಕೆ ಅಂತ್ಯಗೊಳ್ಳಲಿದ್ದು, ಈ ಹುದ್ದೆಯನ್ನು ವಿಶ್ವವಿದ್ಯಾಲಯದ ಧನಸಹಾಯ ಆಯೋಗದ ಮಾರ್ಗಸೂಚಿಗಳು ಮತ್ತು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 2004 ರನ್ವಯ ಹಾಗೂ ಅದರಲ್ಲಿ ಕಲಂ 13 ರಲ್ಲಿ ವಿಧಿಸಿರುವ ಷರತ್ತು ಹಾಗೂ ನಿಬಂಧನೆಗಳಡಿ ಭರ್ತಿ ಮಾಡಲು ಉದ್ದೇಶಿಸಲಾಗಿದೆ.

ಆದ್ದರಿಂದ, ವಿಶ್ವವಿದ್ಯಾಲಯದ ಧನಸಹಾಯ ಆಯೋಗದ ಮಾರ್ಗಸೂಚಿಗಳು ಮತ್ತು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2004 ರನ್ವಯ ಕುಲಪತಿಯವರಾಗಿ ನೇಮಕ ಹೊಂದಲು ಬಯಸುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಪಶುವೈದ್ಯಕೀಯ ವಿಜ್ಞಾನ/ಪಶು ವಿಜ್ಞಾನ/ ಹೈನುವಿಜ್ಞಾನ /ಮೀನುಗಾರಿಕೆ ವಿಜ್ಞಾನ ಹಾಗೂ ಈ ಸಂಬಂಧಿತ ಕ್ಷೇತ್ರದಲ್ಲಿ ಪ್ರಾಧ್ಯಾಪಕ ಅಥವಾ ತತ್ಸಮಾನ ವೃಂದದಲ್ಲಿ 10 ವರ್ಷ ಅಥವಾ ಅದಕ್ಕೂ ಮೇಲ್ಪಟ್ಟ ಅವಧಿಗೆ ಸೇವೆ ಸಲ್ಲಿಸಿರತಕ್ಕದ್ದು. ಅರ್ಜಿ ಸಲ್ಲಿಸಲು ಬಯಸುವ ಅರ್ಹ ಅಭ್ಯರ್ಥಿಗಳು/ ಅಧಿಕಾರಿಗಳು ತಮ್ಮ ಸಂಪೂರ್ಣ ಸೇವಾ ವಿವರಗಳುಳ್ಳ ಅರ್ಜಿಗಳನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ, ಅವಶ್ಯವಿರುವ ವಿವರ/ದಾಖಲೆಗಳೊಂದಿಗೆ 5 ಪ್ರತಿಗಳಲ್ಲಿ ಸರ್ಕಾರದ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು ರವರಿಗೆ ಈ ಸುತ್ತೋಲೆ ಹೊರಡಿಸಿದ ಮೂವತ್ತು(30) ದಿನಗಳೊಳಗಾಗಿ ಸಲ್ಲಿಸತಕ್ಕದ್ದು.

ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿರುವ ನಮೂನೆಯನ್ನು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ (www.kvafsu.edu.in) ಪಡೆಯುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಬಿ.ಎನ್. ಪ್ರವೀಣ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

25/1/22

**ಇವರಿಗೆ,**

1. ಕುಲಪತಿಗಳು, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್.

...2

2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು.
3. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ನವಿಲೆ, ಶಿವಮೊಗ್ಗ.
4. ಕುಲಪತಿಗಳು, ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ.
5. ಕುಲಸಚಿವರು, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್.
6. ಕುಲಸಚಿವರು, ಕೃಷಿ/ತೋಟಗಾರಿಕೆ ವಿಶ್ವವಿದ್ಯಾಲಯ, ಬೆಂಗಳೂರು/ ಧಾರವಾಡ/ ರಾಯಚೂರು/ ಶಿವಮೊಗ್ಗ/ಬಾಗಲಕೋಟೆ.

**ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ:-**

1. ಘನತೆವೆತ್ತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
2. ಮಾನ್ಯ ಪಶುಸಂಗೋಪನೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.
4. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.